# ದಿನಾಂಕ: ೭.೭.೨೦೧೭ರಂದು ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಪ್ರೊ.ಎಸ್.ಜಿ.ಸಿದ್ಧರಾಮಯ್ಯ ಅವರ ಅಧ್ಯಕ್ಷತೆಯಲ್ಲಿ ನಡೆದ ಉನ್ನತ ಶಿಕ್ಷಣ ಇಲಾಖೆಯ ಕನ್ನಡ ಅನುಷ್ಠಾನ ಪ್ರಗತಿ ಪರಿಶೀಲನಾ ಸಭೆಯ ನಡವಳಿ

ಸಭೆಯಲ್ಲಿ ಭಾಗವಹಿಸಿದವರು :

೧. ಶ್ರೀ ಜಾವೇದ್ ಅಖ್ತರ್, ಭಾ.ಆ.ಸೇ. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ).
೨. ಪ್ರೊ.ಚಂದ್ರಶೇಖರ ಪಾಟೀಲ್, ಹಿಂದಿನ ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರು ಹಾಗು ನಾಡಿನ ಖ್ಯಾತ ಸಾಹಿತಿಗಳು.
೩. ಶ್ರೀ ಆರ್. ಸೋಮಶೇಖರ್, ಉಪ ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ (ವಿಶ್ವವಿದ್ಯಾನಿಲಯಗಳು)
೪. ಶ್ರೀ ಮಂಜುನಾಥ ಪಾಟೀಲ್, ಉಪ ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ (ತಾಂತ್ರಿಕ ಮತ್ತು ಕಾಲೇಜು ಶಿಕ್ಷಣ)
೫. ಶ್ರೀಮತಿ ಅಪರ್ಣಾ ಪಾವಟೆ, ಉಪ ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ (ಯೋಜನೆ)
೬. ಶ್ರೀ ವೀರಬ್ರಹ್ಮಚಾರಿ, ಅಧೀನ ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ (ವಿಶ್ವವಿದ್ಯಾನಿಲಯಗಳು–೧)
೭. ಶ್ರೀ ಎಂ.ಎ.ಅಹ್ಮದ್ ಜಾನ್, ಅಧೀನ ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ (ವಿಶ್ವವಿದ್ಯಾನಿಲಯಗಳು–೨)
೮. ಶ್ರೀ ಎಸ್. ವೆಂಕಟೇಶ್, ಅಧೀನ ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ (ತಾಂತ್ರಿಕ ಶಿಕ್ಷಣ)
೯. ಶ್ರೀ ಶಿವಲಿಂಗಯ್ಯ, ಅಧೀನ ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ (ಕಾಲೇಜು ಶಿಕ್ಷಣ)
೧೦. ಡಾ.ಕೆ.ಮುರಳಿಧರ್, ಕಾರ್ಯದರ್ಶಿಗಳು, ಕನ್ನಡ ಅಭಿವೃದ್ಧಿ ಪ್ರಾಧಿಕಾರ, ವಿಧಾನಸೌಧ, ಬೆಂಗಳೂರು.
೧೧. ಶ್ರೀ ಗಿರೀಶ್ ಪಟೇಲ್, ಸದಸ್ಯರು, ಕನ್ನಡ ಅಭಿವೃದ್ಧಿ ಪ್ರಾಧಿಕಾರ.

ಮೊದಲಿಗೆ ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಕಾರ್ಯದರ್ಶಿಗಳಾದ ಡಾ.ಕೆ.ಮುರಳಿಧರ ಅವರು ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಸಂಕ್ಷಿಪ್ತ ಪರಿಚಯಮಾಡಿಕೊಡುತ್ತಾ ಪ್ರಗತಿ ಪರಿಶೀಲನೆಯ ಉದ್ದೇಶ ಮತ್ತು ಮಹತ್ವವನ್ನು ತಿಳಿಸಿದರು.

ಸಭೆಯನ್ನು ಉದ್ದೇಶಿಸಿ ಮಾತನಾಡಿದ ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಪ್ರೊ.ಎಸ್.ಜಿ.ಸಿದ್ಧರಾಮಯ್ಯ ಅವರು, ಬೆಂಗಳೂರು ಕೇಂದ್ರ ಸ್ಥಾನದಲ್ಲಿರುವ ಸಚಿವಾಲಯದ ಇಲಾಖೆಗಳ ಪ್ರಗತಿಪರಿಶೀಲನೆಯಲ್ಲಿ ಉನ್ನತ ಶಿಕ್ಷಣ ಇಲಾಖೆ ೧೦ನೇ ಇಲಾಖೆಯಾಗಿದ್ದು ಕನ್ನಡ ಅನುಷ್ಠಾನ ಕೇವಲ ತಳಮಟ್ಟದಿಂದಲೇ ಅಲ್ಲ ಮೇಲ್ಮಟ್ಟದಲ್ಲಿಯೂ ಸಂಪೂರ್ಣವಾಗಿ ಅನುಷ್ಠಾನಗೊಳ್ಳಬೇಕು. ತಂತ್ರಾಂಶ ಅಳವಡಿಕೆಯಿಂದ ಕನ್ನಡ ಅನುಷ್ಠಾನ ನೂರರಷ್ಟು ಸಾಧ್ಯವಾಗದಿರುವುದು ಪ್ರಗತಿ ಪರಿಶೀಲನೆಯಲ್ಲಿ ಕಂಡುಬಂದಿದ್ದು ಇದೂ ಕೂಡ ಒಂದು ಲೋಪ ಎಂಬುದನ್ನು ಗಮನಿಸಲಾಗಿದ್ದು, ಅಂತರ್ಜಾಲ ಮಾಹಿತಿ ಜಾಹಿರಾತು ಆದೇಶಗಳು ಟಿಪ್ಪಣಿಗಳು ಎಲ್ಲವೂ ಕನ್ನಡದಲ್ಲಿರುವಂತೆ ನೋಡಿಕೊಳ್ಳುವುದು ಮತ್ತು ಜಾರಿಗೊಳಿಸುವುದು ಸೂಕ್ತ ಎಂದು ತಿಳಿಸಿದ ಅವರು ಪ್ರಮುಖವಾಗಿ ಶಿಕ್ಷಣದಲ್ಲಿ ಕನ್ನಡವನ್ನು ಸಂಪೂರ್ಣ ಜಾರಿಗೆ ತರುವ ಧ್ಯೇಯೋದ್ದೇಶ ಹೊಂದಿರುವ ಕನ್ನಡ ಅಭಿವೃದ್ಧಿ ಪ್ರಾಧಿಕಾರವು ಇದರಲ್ಲಿ ಉನ್ನತ ಶಿಕ್ಷಣ ಇಲಾಖೆಯ ಪಾತ್ರ ಗಣನೀಯವಾದುದು ಎಂಬುದನ್ನು ಅರಿತಿದೆ ಎಂದು ತಿಳಿಸಿದರು. ಉನ್ನತ ಶಿಕ್ಷಣ ಇಲಾಖೆಯೂ ಸೇರಿದಂತೆ ತನ್ನ ಅಧೀನ ಕಚೇರಿಗಳಲ್ಲಿನ ಅಂತರ್ಜಾಲ ತಾಣ, ಸಾಮಾಜಿಕ ಜಾಲತಾಣ, ಮಾಹಿತಿ ಹಂಚಿಕೆಗಾಗಿ ಸಿದ್ಧಪಡಿಸುವ ಮೊಬೈಲ್ ಆಪ್ ಮುಂತಾದವುಗಳಲ್ಲಿ ಇಲಾಖೆಗೆ ಸಂಬಂಧಪಟ್ಟ ಮಾಹಿತಿಯನ್ನು ಪ್ರಧಾನಮಟವಾಗಿ ಕನ್ನಡದಲ್ಲಿ ನೀಡುವಂತೆ ಮತ್ತು ಆಯ್ಕೆ ಭಾಷೆಯನ್ನಾಗಿ ಮಾತ್ರ ಆಂಗ್ಲ ಭಾಷೆಯನ್ನು ನೀಡುವಂತೆ ವಿನ್ಯಾಸಗೊಳಿಸಬೇಕೆಂದು ಸೂಚಿಸಿದರು. ಅಂತೆಯೇ

ವಿಶ್ವವಿದ್ಯಾಲಯಗಳಲ್ಲಿ ಕನ್ನಡ ಭಾಷೆಯನ್ನು ಕಡೆಗಣಿಸುತ್ತಿರುವುದಾಗಿ ಅನೇಕ ದೂರುಗಳು ಪ್ರಾಧಿಕಾರಕ್ಕೆ ಬಂದಿದ್ದು ಈ ಹಿನ್ನೆಲೆಯಲ್ಲಿ ಎಲ್ಲಾ ವಿಶ್ವವಿದ್ಯಾಲಯಗಳಲ್ಲಿ ಕನ್ನಡವನ್ನು ಕಡ್ಡಾಯವಾಗಿ ಒಂದು ಭಾಷೆಯನ್ನಾಗಿ ಬೋಧಿಸುವಂತೆ ಮತ್ತು ಕನಿಷ್ಠ ನಾಲ್ಕು ಸೆಮಿಸ್ಟರ್‌ಗಳಲ್ಲಿ ಕನ್ನಡ ಭಾಷೆಯನ್ನು ಬೋಧಿಸುವಂತೆ ಸೂಕ್ತ ಆದೇಶಗಳನ್ನು ಹೊರಡಿಸಬೇಕೆಂದು ಸೂಚಿಸಿದರು.

ಈ ನಿಟ್ಟಿನಲ್ಲಿ ಉನ್ನತ ಶಿಕ್ಷಣ ಇಲಾಖೆ ಈಗಾಗಲೇ ಆದೇಶ ಸಂಖ್ಯೆ : ಇಡಿ ೭೬ ಟಿಇಪಿ ೨೦೧೬, ದಿನಾಂಕ: ೨೧.೬.೨೦೧೬ರಲ್ಲಿ ಡಿಪ್ಲೊಮೊ ಪಾಲಿಟೆಕ್ನಿಕ್‌ಗಳಲ್ಲಿ ನಾಲ್ಕು ಸೆಮಿಸ್ಟರ್‌ಗಳಲ್ಲಿ ಕನ್ನಡ ಕಲಿಸಲು ಸೂಚನೆ ನೀಡಿರುವುದು. ಅನಧಿಕೃತ ಟಿಪ್ಪಣಿ ಹಾಗು ಪತ್ರ ಸಂಖ್ಯೆ ಇಡಿ ೩೪೭ ಯುಎನ್‌ಇ ೨೦೧೬, ದಿನಾಂಕ : ೨೯.೦೯.೨೦೧೬ರನ್ವಯ ವೃತ್ತಿಪರ ಶಿಕ್ಷಣದಲ್ಲಿ (ಇಂಜಿನಿಯರಿಂಗ್, ಕಾನೂನು, ಮೆಡಿಕಲ್ ಹಾಗು ಕೃಷಿ ವಿಶ್ವವಿದ್ಯಾಲಯಗಳು) ಕಡ್ಡಾಯವಾಗಿ ಕನ್ನಡವನ್ನು ಬೋಧಿಸಲು ತಿಳಿಸಿರುವುದನ್ನು ಗಮನಿಸಿದ ಅಧ್ಯಕ್ಷರು ಉನ್ನತ ಶಿಕ್ಷಣ ಇಲಾಖೆ ಕೈಗೊಂಡಿರುವ ಕ್ರಮಕ್ಕೆ ಅಭಿನಂದನೆಗಳನ್ನು ಸೂಚಿಸಿದರು ಮತ್ತು ಇದನ್ನು ಕಟ್ಟುನಿಟ್ಟಾಗಿ ಎಲ್ಲಾ ವಿಶ್ವವಿದ್ಯಾಲಯಗಳಲ್ಲಿ ಜಾರಿಗೊಳಿಸಲು ಸೂಚಿಸಬೇಕು ಹಾಗು ಪರೀಕ್ಷೆಗೆ ಪರಿಗಣಿಸಿ ಅಂಕಗಳನ್ನು ಶ್ರೇಣಿಯ ಪರಿಗಣನೆಗೂ ಒಳಪಡಿಸಬೇಕು.ಕಾಲಕಾಲಕ್ಕೆ ಪರಿಶೀಲಿಸಿ ಅಭಿವೃದ್ಧಿ ಪ್ರಾಧಿಕಾರಕ್ಕೆ ಮಾಹಿತಿ ನೀಡುವಂತೆ ಉನ್ನತ ಶಿಕ್ಷಣ ಇಲಾಖೆಯ ಪ್ರಧಾನ ಕಾರ್ಯದರ್ಶಿಗಳಿಗೆ ಸೂಚಿಸಿದರು.

ಪರಿಶೀಲನೆಯಲ್ಲಿ ಹಲವಾರು ಕಡತಗಳು, ಪತ್ರಗಳು ಹಾಗು ಟಿಪ್ಪಣಿಗಳನ್ನು ಪರಿಶೀಲಿಸಲಾಗಿ ವ್ಯಕ್ತವಾದ ಅಭಿಪ್ರಾಯಗಳನ್ನು ಪರಿಗಣಿಸಿ ಈ ಕೆಳಕಂಡ ನಿರ್ಣಯಗಳನ್ನು ಕೈಗೊಳ್ಳಲಾಯಿತು.

೧. ಕನ್ನಡ ಅನುಷ್ಠಾನಕ್ಕೆ ಸಂಬಂಧಿಸಿದಂತೆ ಕನ್ನಡ ಘಟಕವನ್ನು ಸ್ಥಾಪಿಸಿ ಇಲಾಖೆಯಲ್ಲಿ ಕನ್ನಡ ಅನುಷ್ಠಾನ ಕುರಿತಂತೆ ಪ್ರಗತಿ ವರದಿಯನ್ನು ಕಾಲಕಾಲಕ್ಕೆ ಪ್ರಾಧಿಕಾರಕ್ಕೆ ಸಲ್ಲಿಸುವುದು. **(ಕ್ರಮ : ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ)**

೨. ಅಂತರ್ಜಾಲ ಮತ್ತು ಸಾಮಾಜಿಕ ತಾಣಗಳಲ್ಲಿ ಪ್ರಧಾನ ಪುಟವನ್ನು ಕಡ್ಡಾಯವಾಗಿ ಕನ್ನಡದಲ್ಲಿ ರೂಪಿಸುವುದು ಮತ್ತು ಸಂಪೂರ್ಣ ಮಾಹಿತಿಯನ್ನು ಕನ್ನಡದಲ್ಲಿಯೇ ನೀಡುವುದು. **(ಕ್ರಮ : ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ)**

೩. ಇಲಾಖೆಯ ವಾಹನಗಳಲ್ಲಿ ಕಡ್ಡಾಯವಾಗಿ ಆಂಗ್ಲ ಅಂಕಿಗಳ ಜೊತೆಗೆ ಕನ್ನಡ ಅಂಕಿಗಳನ್ನೂ ಬಳಸುವುದು. **(ಕ್ರಮ : ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ)**

೪. ಡೀಮ್ಡ್ ವಿಶ್ವವಿದ್ಯಾಲಯಗಳಲ್ಲಿ ಕಡ್ಡಾಯವಾಗಿ ನಾಲ್ಕು ಸೆಮಿಸ್ಟರ್‌ಗಳಲ್ಲಿ ಕನ್ನಡವನ್ನು ಬೋಧನೆ ಮಾಡಲು ಸೂಕ್ತ ನಿರ್ದೇಶನ ನೀಡುವುದು. **(ಕ್ರಮ : ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ)**

೫. ಕೆಲವು ವಿಶ್ವವಿದ್ಯಾಲಯಗಳಲ್ಲಿ ಕನ್ನಡ ಭಾಷೆಯನ್ನು ಬೋಧಿಸುವ ಪ್ರಾಧ್ಯಾಪಕರಿಗೆ ವೇತನ ತಾರತಮ್ಯವೆಸಗುತ್ತಿರುವುದಕ್ಕೆ ದೂರು ಬಂದಿದ್ದು ಈ ಬಗ್ಗೆ ಮಾಹಿತಿ ಪಡೆದು ವರದಿಯೊಂದನ್ನು ಪ್ರಾಧಿಕಾರಕ್ಕೆ ಸಲ್ಲಿಸುವುದು. **(ಕ್ರಮ : ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ)**

೬. ಎಲ್ಲಾ ವಿಶ್ವವಿದ್ಯಾಲಯಗಳಲ್ಲಿ ಕಡ್ಡಾಯವಾಗಿ ಕನ್ನಡವನ್ನು ಒಂದು ಭಾಷೆಯನ್ನಾಗಿ ಬೋಧಿಸುವ ಬಗ್ಗೆ ಬೋರ್ಡ್ ಆಫ್ ಸ್ಟಡೀಸ್ ಪ್ರಕಾರ ವರದಿ ತರಿಸಿಕೊಂಡು ಪ್ರಾಧಿಕಾರಕ್ಕೆ ಸಲ್ಲಿಸುವುದು. **(ಕ್ರಮ : ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ)**

೭. ಸಿಬಿಸಿಎಸ್ ಪ್ರಕಾರ ಗೈಡ್ ಲೈನ್ಸ್ ನೀಡಬೇಕು.

೮. ಕನ್ನಡ ದಿನಪತ್ರಿಕೆಗಳಲ್ಲಿ ಆಂಗ್ಲ ಭಾಷೆಯಲ್ಲಿ ಜಾಹಿರಾತುಗಳನ್ನು ನೀಡಿರುವುದನ್ನು ಬಿಟ್ಟು ಇನ್ನುಮುಂದೆ ಕಡ್ಡಾಯವಾಗಿ ಕನ್ನಡ ಜಾಹಿರಾತು ನೀಡುವಂತೆ ವಿಶ್ವವಿದ್ಯಾಲಯಗಳಿಗೆ ಸೂಚನೆ ನೀಡಬೇಕು. **(ಕ್ರಮ : ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ)**

೯. ಹೊರಗುತ್ತಿಗೆ ಆಧಾರದಲ್ಲಿ ನೇಮಕಾತಿ ಮಾಡಿಕೊಂಡಿರುವ ಗ್ರೂಪ್ 'ಸಿ' ಮತ್ತು ಗ್ರೂಪ್ 'ಡಿ' ನೌಕರರ ಸಂಪೂರ್ಣ ಮಾಹಿತಿಯನ್ನು ಕನ್ನಡ ಅಭಿವೃದ್ಧಿ ಪ್ರಾಧಿಕಾರಕ್ಕೆ ಸಲ್ಲಿಸುವುದು. **(ಕ್ರಮ : ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ)**

೧೦. ವೈದ್ಯಕೀಯ, ತಾಂತ್ರಿಕ ಹಾಗು ಕೃಷಿ ವಿಶ್ವವಿದ್ಯಾಲಯಗಳಲ್ಲೂ ಸಹ ಕಡ್ಡಾಯವಾಗಿ ಕನ್ನಡ ಭಾಷೆಯನ್ನು ಬೋಧಿಸುವಂತೆ ಹಾಗು ಪರೀಕ್ಷೆಗೂ ಪರಿಗಣಿಸುವಂತೆ ಪತ್ರ ಮತ್ತು ಅನಧಿಕೃತ ಟಿಪ್ಪಣಿ ಮೂಲಕ ತಿಳಿಸಿದ್ದು ಈ ಬಗ್ಗೆ ವಸ್ತುಸ್ಥಿತಿ ವರದಿಯನ್ನು ಪ್ರಾಧಿಕಾರಕ್ಕೆ ಸಲ್ಲಿಸುವುದು. (**ಕ್ರಮ : ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ**)

೧೧. ಪರಿಶೀಲನೆ ಹಂತದಲ್ಲಿ ಕೆಲವೊಂದು ಟಿಪ್ಪಣಿಹಾಳೆಗಳು ಮತ್ತು ಕೆಲವೊಂದು ಪತ್ರಗಳಲ್ಲಿ ಆಂಗ್ಲ ಭಾಷೆಯನ್ನು ಬಳಸಿರುವುದು ಕಂಡುಬಂದಿದ್ದು ಕೂಡಲೇ ತಪ್ಪುಗಳನ್ನು ಸರಿಪಡಿಸಿಕೊಂಡು ರಾಜ್ಯ ಸರ್ಕಾರದೊಳಗೆ ವ್ಯವಹರಿಸುವ ಪತ್ರಗಳು, ಟಿಪ್ಪಣಿಗಳೆಲ್ಲವೂ ಕಡ್ಡಾಯವಾಗಿ ಕನ್ನಡದಲ್ಲಿರತಕ್ಕದ್ದು. (**ಕ್ರಮ : ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ**)

ಸಭೆಯಲ್ಲಿ ತೆಗೆದುಕೊಂಡ ನಿರ್ಣಯಗಳನ್ವಯ ಕ್ರಮ ಕೈಗೊಂಡು ೧೫ ದಿನಗಳ ಒಳಗಾಗಿ ಅನುಪಾಲನಾ ವರದಿಯನ್ನು ಸಲ್ಲಿಸುವಂತೆ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳಿಗೆ ಸೂಚನೆ ನೀಡಿ ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರು ಸಭೆಯನ್ನು ಮುಕ್ತಾಯಗೊಳಿಸಿದರು.

(ಡಾ.ಕೆ.ಮುರಳಿಧರ)
ಕಾರ್ಯದರ್ಶಿ
ಕನ್ನಡ ಅಭಿವೃದ್ಧಿ ಪ್ರಾಧಿಕಾರ

(ಪ್ರೊ.ಎಸ್.ಜಿ.ಸಿದ್ಧರಾಮಯ್ಯ)
ಅಧ್ಯಕ್ಷರು
ಕನ್ನಡ ಅಭಿವೃದ್ಧಿ ಪ್ರಾಧಿಕಾರ